ಕರ್ನಾಟಕ ಸರ್ಕಾರ

# ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ:ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ:07-06-2022

## ಜ್ಞಾಪನ

ವಿಷಯ: ಅನುದಾನಿತ ಪ್ರಾಥಮಿಕ/ಪ್ರೌಢಶಾಲಾ ಶಿಕ್ಷಕರ ಹಾಗೂ ಸಿಬ್ಬಂದಿ ವರ್ಗದವರ ಸೇವಾ ಮಾಹಿತಿಯನ್ನು ಶಿಕ್ಷಕ ಮಿತ್ರ ತಂತ್ರಾಂಶದಲ್ಲಿ (EEDS) ಇಂದೀಕರಿಸಿ ಅಂತಿಮಗೊಳಿಸುವ ಬಗ್ಗೆ.

ಉಲ್ಲೇಖ: ದಿನಾಂಕ:01-06-2022 ರಂದು ನಿರ್ದೇಶಕರು (ಪ್ರಾಥಮಿಕ ಶಿಕ್ಷಣ) ರವರ ಅಧ್ಯಕ್ಷತೆಯಲ್ಲಿ ರಂದು ನಡೆದ ಸಭೆಯ ನಿರ್ಣಯದಂತೆ

****

ರಾಜ್ಯದ ಎಲ್ಲಾ ಅನುದಾನಿತ ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯ ಶಿಕ್ಷಕರು ಹಾಗೂ ಸಿಬ್ಬಂಧಿಗಳ ಸೇವಾ ಮಾಹಿತಿಯನ್ನು ಈಗಾಗಲೇ TDS ತಂತ್ರಾಂಶದಲ್ಲಿ ಅಳವಡಿಸಿದ್ದು, ಅಪೂರ್ಣಗೊಂಡಿರುತ್ತದೆ. ಸದರಿ TDS ತಂತ್ರಾಂಶದಲ್ಲಿರುವ ಮಾಹಿತಿಯನ್ನು ಶಿಕ್ಷಕ ಮಿತ್ರ ತಂತ್ರಾಂಶಕ್ಕೆ(EEDS) ವರ್ಗಾಹಿಸಲಾಗಿದ್ದು, ಸದರಿ ಅಪೂರ್ಣಗೊಂಡಿರುವ ಮಾಹಿತಿಯನ್ನು ಪೂರ್ಣಗೊಳಿಸಲು ಪ್ರಸ್ತುತ ಅವಕಾಶ ಕಲ್ಪಿಸಲಾಗಿರುತ್ತದೆ.

ಈ ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಆಯಾ ಕ್ಷೇತ್ರದ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಒಳಪಡುವ ಅನುದಾನಿತ ಪ್ರಾಥಮಿಕ, ಪ್ರೌಢಶಾಲಾ ಸಹ ಶಿಕ್ಷಕರು, ಮುಖ್ಯ ಶಿಕ್ಷಕರು ಹಾಗೂ ಸಿಬ್ಬಂಧಿಗಳ ಸೇವಾ ಮಾಹಿತಿಯನ್ನು ಸೇವಾ ಪುಸ್ತಕದಲ್ಲಿನ ಮಾಹಿತಿಯಂತೆ EEDS ತಂತ್ರಾಂಶದಲ್ಲಿ ಕಡ್ಡಾಯವಾಗಿ ಇಂದೀಕರಿಸಲು ದಿನಾಂಕ:20-06-2022 ರವರೆಗೆ ಅವಕಾಶ ಕಲ್ಪಿಸಲಾಗಿದೆ.

ಜಿಲ್ಲಾ ಉಪನಿರ್ದೇಶಕರುಗಳು ಇಂಧೀಕರಣ ಕಾರ್ಯಕ್ಕೆ ಸಂಬಂದಿಸಿದಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾರ್ಗದರ್ಶನ ನೀಡುವುದರೊಂದಿಗೆ ಈ ಕಾರ್ಯವು ನಿಗದಿತ ಅವಧಿಯೊಳಗೆ ಪರಿಪೂರ್ಣವಾಗಿ ಇಂಧೀಕರಿಸುವಲ್ಲಿ ಸಮನ್ವಯ ಸಾಧಿಸಲು ಸೂಚಿಸಿದೆ. ತಂತ್ರಾಂಶಕ್ಕೆ ಸಂಬಂಧಿಸಿದಂತೆ ಯಾವುದೇ ತಾಂತ್ರಿಕ ಗೊಂದಲಗಳಿದ್ದಲ್ಲಿ ವಿವರಗಳನ್ನು karonlineserviceshelp@gmail.com ಗೆ ಇ-ಮೇಲ್ ಮುಖೇನ ಮನವಿ ಸಲ್ಲಿಸಲು ತಿಳಿಸಿದೆ.

ಡಾ.ವಿಶಾಲ್.ಆರ್., ಭಾ.ಆ.ಸೇ.,
ಆಯುಕ್ತರು

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ)ರವರ ಮುಂದಿನ ಅಗತ್ಯ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತುರ್ತು ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಆಡಳಿತ ಮಂಡಳಿಗೆ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖೇನ)
4. ರಾಜ್ಯದ ಎಲ್ಲಾ ಅನುದಾನಿತ ಪ್ರಾಥಮಿಕ ಮತ್ತು ಶಾಲಾ ಮುಖ್ಯೋಪಾಧ್ಯಾಯರುಗಳಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ (ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖೇನ)

**ಪ್ರತಿಯನ್ನು**

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರಿಗೆ ಮಾಹಿತಿಗಾಗಿ
2. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಮಾಹಿತಿಗಾಗಿ
3. ರಾಜ್ಯದ ಎಲ್ಲಾ ವಿಭಾಗೀಯ ಕಾರ್ಯದರ್ಶಿಗಳು ಕೆ.ಎಸ್.ಇ.ಇ.ಬಿ ಹಾಗೂ ಪದನಿಮಿತ್ತ ಸಹ ನಿರ್ದೇಶಕರು ಬೆಂಗಳೂರು/ಮೈಸೂರು/ಗುಲ್ಬರ್ಗಾ/ಬೆಳಗಾವಿ
4. ಕಛೇರಿ ಪ್ರತಿ.